# ಕರ್ನಾಟಕ ಸರ್ಕಾರದ ನಡವಳಿಗಳು

ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ
ಕ್ರಮಾಂಕ 8634
20 OCT 2016

ವಿಷಯ: ವಿಶಿಷ್ಟ ಕೌಶಲ್ಯಾಭಿವೃದ್ಧಿ ಸಂಸ್ಥೆಗಳು ಯೋಜನೆಯಡಿ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಮಾರ್ಗಸೂಚಿಗಳನ್ನು ಅನುಮೋದಿಸುವ ಕುರಿತು.

ಓದಲಾಗಿದೆ: ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಇವರ ಪತ್ರ ಸಂ: ಕೈವಾಇ/ ಜಿಕೈಕೇ/ಸಿ2/01/ಮಾರ್ಗಸೂಚಿ/2016-17 ದಿ: 10.06.2016.

## ಪ್ರಸ್ತಾವನೆ

ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಬೆಂಗಳೂರು ಇವರು ಮೇಲೆ ಓದಲಾದ ಪ್ರಸ್ತಾವನೆಯಲ್ಲಿ ರಾಜ್ಯದ ನಿರುದ್ಯೋಗಿ ಯುವಕ / ಯುವತಿಯರಿಗೆ ಕೈಗಾರಿಕೆಗಳಲ್ಲಿ ಉದ್ಯೋಗಾವಕಾಶಗಳನ್ನು ಕಲ್ಪಿಸಲು ಅಥವಾ ಸ್ವಂತ ಉದ್ಯೋಗಾವಕಾಶವನ್ನು ಒದಗಿಸುವ ಉದ್ದೇಶದಿಂದ ಸಾಮರ್ಥ್ಯ ಸಾಧ್ಯತೆಯಿರುವ ಸರ್ಕಾರಿ ಮತ್ತು ಸರ್ಕಾರದಿಂದ ನೇರವಾಗಿ ಸ್ಥಾಪನೆಗೊಂಡ ಸಂಘ /ಸಂಸ್ಥೆ ಮತ್ತು ತರಬೇತಿ ಸಂಸ್ಥೆಗಳಿಂದ ಸಕ್ರಿಯೆಯ ಭಾಗವಹಿಸುವಿಕೆಯನ್ನು ಪಡೆದು ಕುಶಲ ಮತ್ತು ವೃತ್ತಿಪರ ಮಾನವ ಸಂಪನ್ಮೂಲದ ಬಲವರ್ಧನೆಗಾಗಿ ವಿಶಿಷ್ಟ ಕೌಶಲ್ಯಾಭಿವೃದ್ಧಿ ಮತ್ತು ವೃತ್ತಿಪರ ತರಬೇತಿಯನ್ನು ವೃತ್ತಿಪರವಾಗಿ ಈ ಸಂಸ್ಥೆಗಳು ನಿರ್ವಹಿಸಲು ಸೂಕ್ತ ವ್ಯವಸ್ಥೆಯನ್ನು ರೂಪಿಸಿ ಅಗತ್ಯವಿರುವ ಕಾರ್ಯಾಗಾರ, ತರಬೇತಿ ಕಟ್ಟಡ, ವಸತಿ ನಿಲಯಗಳು, ಪ್ರಯೋಗಾಲಯ, ಆಧುನಿಕ ಯಂತ್ರೋಪಕರಣಗಳು ಮತ್ತು ಉಪಕರಣಗಳನ್ನು ಅಳವಡಿಸಲು ಅವಕಾಶ ಕಲ್ಪಿಸಲಾಗುತ್ತಿದೆ. ಆದುದರಿಂದ, ಸದರಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಮಾರ್ಗಸೂಚಿಗಳನ್ನು ಸಿದ್ಧಪಡಿಸಿ, ಅನುಮೋದನೆಗಾಗಿ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಮೇಲ್ಕಂಡ ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಐ 46 ಸಪ್ರಕೈ 2016 ಬೆಂಗಳೂರು, ದಿನಾಂಕ: 18.10.2016**

ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ವಿಶಿಷ್ಟ ಕೌಶಲ್ಯಾಭಿವೃದ್ಧಿ ಸಂಸ್ಥೆಗಳು ಯೋಜನೆಯಡಿ ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಜಿಟಿಟಿಸಿ, ಕಿಲ್ಟ್, ಸರ್ಕಾರಿ ಸೌಮ್ಯದ ಸಂಸ್ಥೆಗಳು, ಕುಶಲಕರ್ಮಿ ತರಬೇತಿ ಸಂಸ್ಥೆಗಳು ಮತ್ತು ಸರ್ಕಾರದಿಂದ ಸ್ಥಾಪಿತಗೊಂಡ ಸಂಘ / ಸಂಸ್ಥೆಗಳು, ನಿರುದ್ಯೋಗಿ ಯುವಕ / ಯುವತಿಯರಿಗೆ ಕೈಗಾರಿಕೆಗಳಲ್ಲಿ ಉದ್ಯೋಗಾವಕಾಶ ಕಲ್ಪಿಸಲು ಅಥವಾ ಸ್ವಂತ ಉದ್ಯೋಗ ಸ್ಥಾಪನೆಗಾಗಿ ತರಬೇತಿ ನೀಡಲಾಗುತ್ತಿದ್ದು, ಈ ಕೇಂದ್ರಗಳ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸಿ, ಅನುಷ್ಠಾನಗೊಳಿಸುವ ಕಾರ್ಯಕ್ರಮ / ಯೋಜನೆಗಳಿಗೆ ಮರುರೂಪಿಸಿದ ಈ ಕೆಳಕಂಡ ಮಾರ್ಗಸೂಚಿಗಳಿಗೆ ಅನುಮೋದನೆ ನೀಡಲಾಗಿದೆ. ಈ ಯೋಜನೆಯ ಅನುಷ್ಠಾನವನ್ನು ಈ ಆದೇಶದಲ್ಲಿ ಅನುಮೋದಿಸಲಾಗಿರುವ ಮಾರ್ಗಸೂಚಿಗಳನ್ವಯ ಅನುಷ್ಠಾನಗೊಳಿಸತಕ್ಕದ್ದು.

ಈ ಯೋಜನೆಯ ಮಾರ್ಗಸೂಚಿ ಕುರಿತಂತೆ ಸರ್ಕಾರದಿಂದ ಹಿಂದೆ ಹೊರಡಿಸಲಾಗಿರುವ ಎಲ್ಲಾ ಆದೇಶಗಳನ್ನು ರದ್ದುಪಡಿಸಲಾಗಿದೆ.